ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE 21/5/2020

# 20 ಲಕ್ಷ ಕೋಟಿ ಪ್ಯಾಕೇಜ್‌ನ ಹಲವು ಯೋಜನೆಗೆ ಸಮ್ಮತಿ

**ನವದೆಹಲಿ:** ಕೊರೋನಾದಿಂದ ಕಂಗೆಟ್ಟ ಆರ್ಥಿಕತೆಗೆ ಚೇತರಿಕೆ ನೀಡಲು ಕೇಂದ್ರ ಸರ್ಕಾರ ಇತ್ತೀಚೆಗೆ ಘೋಷಿಸಿದ್ದ 20 ಲಕ್ಷ ಕೋಟಿ ರು. ಪ್ಯಾಕೇಜ್‌ನ ಕೆಲ ಯೋಜನೆಗಳಿಗೆ ಕೇಂದ್ರ ಸಚಿವ ಸಂಪುಟ ಬುಧವಾರ ಅನುಮೋದನೆ ನೀಡಿದೆ.

ಕಿರು, ಸಣ್ಣ, ಮಧ್ಯಮ ಉದ್ದಿಮೆ (ಎಂಎಸ್‌ಎಂಇ)ಗಳಿಗೆ ಯಾವುದೇ ಅಡಮಾನ ಅಥವಾ ಗ್ಯಾರಂಟಿ ಕೇಳದೆ 3 ಲಕ್ಷ ಕೋಟಿ ರು. ಸಾಲ, 8 ಕೋಟಿ ವಲಸೆ ಕಾರ್ಮಿಕರಿಗೆ 2 ತಿಂಗಳ ಕಾಲ ತಲಾ 5 ಕೆ.ಜಿ.ಆಹಾರ ಧಾನ್ಯ ಹಾಗೂ ಪ್ರತಿ ಕುಟುಂಬಕ್ಕೆ 1 ಕೆ.ಜಿ.ಬೇಳೆಕಾಳು ವಿತರಣೆ, 26 ಶಸ್ತ್ರಾಸ್ತ್ರಗಳನ್ನು ದೇಶೀಯವಾಗಿಯೇ ಖರೀದಿಸುವ, ಕಲ್ಲಿದ್ದಲು ಗಣಿಗಳ ಖಾಸಗೀಕರಣದ ಮೂಲಕ ಖನಿಜ ನಿಕ್ಷೇಪಗಳ ಹರಾಜು ಮತ್ತು ಆದಾಯ ಹಂಚಿಕೆ ಆಧಾರದಲ್ಲಿ ಕಲ್ಲಿದ್ದಲು ಮಾರಾಟ,. ಕೊರೋನಾದಿಂದ ಸಂಕಷ್ಟ ಎದುರಿಸುತ್ತಿರುವ ಉದ್ಯಮಗಳಿಗೆ ಅಗತ್ಯ ಸಾಲ ಸೌಲಭ್ಯ ಒದಗಿಸಿಕೊಡಲು ಬ್ಯಾಂಕೇತರ ಹಣಕಾಸು ಸಂಸ್ಥೆಗಳಿಗೆ 30000 ಕೋಟಿ ರು. ವಿಶೇಷ ನೆರವು., ಕಿರುಸಾಲ ಸಂಸ್ಥೆಗಳಿಗೆ 450000 ಕೋಟಿ ರು. ಮೊತ್ತದ ಸಾಲಕ್ಕೆಬ್ಯಾಂಕ್ ಖಾತರಿ ನೀಡುವ ಯೋಜನೆಗೆ ಸಚಿವ ಸಂಪುಟ ಅನುಮೋದನೆ ನೀಡಿದೆ.

## ಉದ್ಯೋಗ ನಷ್ಟದ ಮಾಹಿತಿ ಬಯಸಿದ ಪ್ರಧಾನಿ ಮೋದಿ

**ನವದೆಹಲಿ:** ಲಾಕ್‌ಡೌನ್‌ನಿಂದ ದೇಶದಲ್ಲಿ 13 ಕೋಟಿಗೂ ಹೆಚ್ಚಿನ ಜನ ನಿರುದ್ಯೋಗಿಗಳಾಗಿದ್ದಾರೆ ಎಂಬ ವರದಿ ಬೆನ್ನಲ್ಲೇ, ಉದ್ಯೋಗ ನಷ್ಟವಾಗಿರುವ ಬಗ್ಗೆ ಮಾಹಿತಿ ಸಂಗ್ರಹಕ್ಕೆ ಪ್ರಧಾನಿ ಮೋದಿ ಮುಂದಾಗಿದ್ದಾರೆ. ವಿವಿಧ ವಲಯಗಳಲ್ಲಿ ಆಗಿರುವ ಉದ್ಯೋಗ ನಷ್ಟದ ಬಗ್ಗೆ ವಿವಿಧ ಸಚಿವಾಲಯಗಳಿಂದ ಬಯಸಿದ್ದಾರೆ. ಲಾಕ್‌ಡೌನ್ ಅವಧಿಯಲ್ಲಿ ಎಷ್ಟು ಜನರು ಉದ್ಯೋಗ ಕಳೆದುಕೊಂಡಿದ್ದಾರೆ ಮಾಹಿತಿ ನೀಡಿ ಎಂದು ಸಚಿವಾಲಯಗಳಿಗೆ ತಿಳಿಸಲಾಗಿದ್ದು, ಪ್ರತಿಕ್ರಿಯೆ ಆಧರಿಸಿ ಮುಮದಿನ ಕ್ರಮ ಜರುಗಿಸಲು ನಿರ್ಧರಿಸಲಾಗಿದೆ.

## ಮತ್ಸ್ಯೋದ್ಯಮ ನೀಲಿ ಕ್ರಾಂತಿಗೆ 20 ಸಾವಿರ ಕೋಟಿ ರು

**ನವದೆಹಲಿ:** ಮತ್ಸ್ಯ ಉದ್ಯಮದ ಸುಸ್ಥಿರ ಅಭಿವೃದ್ಧಿಗಾಗಿ ಮುಂದಿನ 5 ವರ್ಷಗಳಲ್ಲಿ 20050 ಕೋಟಿ ರು. ವಿನಿಯೋಗಿಸುವ ಮಹತ್ವದ ಮತ್ಸ್ಯಸಂಪದ ಯೋಜನೆಗೆ ಕೇಂದ್ರ ಸಚಿವ ಸಂಪುಟ ಬುಧವಾರ ಅನುಮೋದನೆ ನೀಡಿದೆ. ಮುಂದಿನ 5 ಆರ್ಥಿಕ ವರ್ಷದಲ್ಲಿ ಈ ಯೋಜನೆ ಜಾರಿ ಮಾಡುವುದಾಗಿ ಕಳೆದ ವರ್ಷದ ಬಜೆಟ್‌ನಲ್ಲಿ ಕೇಂದ್ರ ಘೋಷಿಸಿತ್ತು. ಈ ಯೋಜನೆಗೆ ಕೇಂದ್ರವು 9407 ಕೋಟಿ ರು., ರಾಜ್ಯ ಸರ್ಕಾರ 4880 ಕೋಟಿ ರು. ಹಾಗೂ ಫಲಾನುಭವಿಗಳ ಪಾಲು 5763 ಕೋಟಿ ರು. ಸೇರಿರಲಿದೆ ಎಂದು ತಿಳಿಸಲಾಗಿದೆ.